393(511) ಶ್ರೀ ವಾಟಾಳ್ ನಾಗರಾಜ್ (ಚಾಮರಾಜನಗರ) : ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಮತ್ತು ಗ್ರಾಮೀಣ ನೀರು ಸರಬರಾಜು ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ರಾಜ್ಯದಲ್ಲಿರುವ ನ್ಯಾಯಬೆಲೆ ಅಂಗಡಿಗಳ ಸಂಖ್ಯೆ ಎಷ್ಟು;

ಆ) ಹೊಸದಾಗಿ ನ್ಯಾಯಬೆಲೆ ಅಂಗಡಿಗಳನ್ನು ಮಂಜೂರು ಮಾಡಲು ಸರ್ಕಾರದಲ್ಲಿ ಪ್ರಸ್ತಾವನೆ ಇದೆಯೇ;

ಇ) ಎ.ಪಿ.ಎಲ್. ಮತ್ತು ಬಿ.ಪಿ.ಎಲ್. ಕಾರ್ಡುಗಳ ಹಂಚಿಕೆಯಲ್ಲಿ ಲೋಪದೋಷ ಗಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಹೊಸದಾಗಿ ನ್ಯಾಯಬೆಲೆ ಅಂಗಡಿಗಳನ್ನು ಮಂಜೂರು ಮಾಡುವ ಪ್ರಕ್ರಿಯೆಯನ್ನು ಯಾವಾಗ ಪ್ರಾರಂಭಿಸಲಾಗುವುದು;

ಉ) ಸರ್ಕಾರಿ ನ್ಯಾಯಬೆಲೆ ಅಂಗಡಿಗಳ ಕನಿಷ್ಟ ಎಷ್ಟು ಪಡಿತರ ಚೀಟಿಗಳನ್ನು ಹೊಂದಿರುತ್ತವೆ;

ಊ) ಹೆಚ್ಚುವರಿಯಾಗಿರುವ ಪಡಿತರ ಚೀಟಿಗಳನ್ನು ಬೇರ್ಪಡಿಸಿ, ಬೇರೊಂದು ನ್ಯಾಯಬೆಲೆ ಅಂಗಡಿಯನ್ನು ಮಂಜೂರು ಮಾಡುವ ಬಗ್ಗೆ ಸರ್ಕಾರದ ನಿಲುವೇನು;

ಋ) ನಿಗದಿತ ಪ್ರಮಾಣಕ್ಕಿಂತ ಹೆಚ್ಚಿಗೆ ಪಡಿತರ ಚೀಟಿಯನ್ನು ಹೊಂದಿರುವ ಸರ್ಕಾರಿ ನ್ಯಾಯಬೆಲೆ ಅಂಗಡಿಗಳ ಸಂಖ್ಯೆ ಎಷ್ಟು?

ಶ್ರೀ ಗೋವಿಂದಪ್ಪ ಎಂ. ಕಾರಜೋಳ (ಆಹಾರ ಮತ್ತು ನಾಗರಿಕ ಸರಬರಾಜು ಮತ್ತು ಗ್ರಾಮೀಣ ನೀರು ಸರಬರಾಜು ಸಚಿವರು)

ಅ) ರಾಜ್ಯದಲ್ಲಿರುವ ನ್ಯಾಯಬೆಲೆ ಅಂಗಡಿಗಳ ಸಂಖ್ಯೆ: 20546

ಆ) ಹೌದು.

ಇ) ಎಪಿಎಲ್ ಮತ್ತು ಬಿಪಿಎಲ್ ಕಾರ್ಡುಗಳ ಹಂಚಿಕೆಯಲ್ಲಿ ಲೋಪದೋಷಗಳು ಇರುವುದು ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ.

ಈ) ದಿನಾಂಕ: 21-1-2006ರಂದು ಸುತ್ತೋಲೆಯನ್ನು ಹೊರಡಿಸಿ ಪ್ರತಿ ಗ್ರಾಮ/ತಾಂಡ ಮತ್ತು ವಸಾಹತುಗಳಲ್ಲಿ ಪ್ರತಿ 500 ಪಡಿತರ ಚೀಟಿಗಳಿಗೆ ಹೊಸ ನ್ಯಾಯಬೆಲೆ ಅಂಗಡಿಗಳನ್ನು ತೆರೆಯಲು ಎಲ್ಲಾ ಜಿಲ್ಲಾಧಿಕಾರಿಗಳಿಗೆ ನಿರ್ದೇಶಿಸಲಾಗಿರುತ್ತದೆ.

ಉ) ಸಾ.ವಿ.ಪ. ನಿಯಂತ್ರಣಾ ಆದೇಶ 1992ರ ಪ್ರಕಾರ ಗ್ರಾಮಾಂತರ ಪ್ರದೇಶದ ಸರ್ಕಾರಿ ನ್ಯಾಯಬೆಲೆ ಅಂಗಡಿಗಳಲ್ಲಿ ಕನಿಷ್ಟ 300 ಹಾಗೂ ನಗರ ಪ್ರದೇಶದ ನ್ಯಾಯಬೆಲೆ ಅಂಗಡಿಗಳನ್ನು ಕನಿಷ್ಟ 500 ಪಡಿತರ ಚೀಟಿಗಳು ಇರಬೇಕಾಗುತ್ತದೆ.

ಊ) ನ್ಯಾಯಬೆಲೆ ಅಂಗಡಿಗಳಲ್ಲಿರುವ ಕನಿಷ್ಟ ಸಂಖ್ಯೆಗಿಂತ ಹೆಚ್ಚು ಪಡಿತರ ಚೀಟಿ ಇದ್ದಲ್ಲಿ ಹೊಸ ನ್ಯಾಯಬೆಲೆ ಅಂಗಡಿ ಮಂಜೂರು ಮಾಡುವಾಗ ಒಂದೇ ಪ್ರದೇಶದಲ್ಲಿ

ವಾಸಿಸುವ ಪಡಿತರ ಚೀಟಿದಾರರು ದೂರದ ಪ್ರದೇಶಗಳಲ್ಲಿರುವ ನ್ಯಾಯಬೆಲೆ ಅಂಗಡಿಗೆ ಹೋಗುವ ಸನ್ನಿವೇಶ ಬರದಂತೆ ಪಡಿತರ ಚೀಟಿದಾರರ ಅನುಕೂಲಗಳನ್ನು ಗಮನದಲ್ಲಿಟ್ಟುಕೊಂಡು ನ್ಯಾಯಬೆಲೆ ಅಂಗಡಿ ಮಂಜೂರಾತಿ ನೀಡಲು ನಿರ್ದೇಶನ ನೀಡಲಾಗಿರುತ್ತದೆ.

ಋ) ರಾಜ್ಯದಲ್ಲಿ ಒಟ್ಟು 20,546 ನ್ಯಾಯಬೆಲೆ ಅಂಗಡಿಗಳಿದ್ದು ನಿಗಧಿತ ಪ್ರಮಾಣಕ್ಕಿಂತ ಹೆಚ್ಚಿಗೆ ಪಡಿತರ ಚೀಟಿಗಳನ್ನು ಹೊಂದಿರುವ ನ್ಯಾಯಬೆಲೆ ಅಂಗಡಿಯ ಮಾಹಿತಿಯು ಪ್ರಸಕ್ತದಲ್ಲಿ ಲಭ್ಯವಿರುವುದಿಲ್ಲ.

394(383) ಶ್ರೀ ವಿಶ್ವನಾಥ ಪಾಟೀಲ್ ಹೆಬ್ಬಾಳ (ಚಿತ್ತಾಪುರ) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಚಿತ್ತಾಪುರ ತಾಲ್ಲೂಕಿನ ಜಿಲ್ಲಾ ಪಂಚಾಯತ್ ಇಂಜಿನಿಯರಿಂಗ್ ಉಪ-ವಿಭಾಗದಲ್ಲಿ ರಸ್ತೆ ನಿರ್ವಹಣೆಗಾಗಿ ಬಂದ ಅನುದಾನದಲ್ಲಿ, ದಿನಗೂಲಿ ನೌಕರರಿಗೆ ಸಂಬಳ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಇದು ಸರಿಯೇ ಹಾಗೂ ಇದನ್ನು ಸರಿಪಡಿಸಲು ಕೈಕೊಳ್ಳುವ ಕ್ರಮವೇನು;

ಇ) ರಸ್ತೆ ನಿರ್ವಹಣೆಗಾಗಿ ಬಂದ ಅನುದಾನ ಸಂಬಳಕ್ಕಾಗಿ ಹೋಗುತ್ತಿರುವುದರಿಂದ ರಸ್ತೆಗಳ ನಿರ್ವಹಣೆ ಇಲ್ಲದೆ ತೀವ್ರ ಹದಗೆಟ್ಟು ಸಂಚಾರಕ್ಕೆ ತುಂಬಾ ತೊಂದರೆಯಾಗುತ್ತಿರುವುದನ್ನು ತಡೆಗಟ್ಟಲು ಮೇಲಿಂದ ಮೇಲೆ ನಿರ್ವಹಣೆ ಮಾಡುವುದು ಕಷ್ಟಕರವಾಗಿರುವುದರಿಂದ ಸರ್ಕಾರ ಏನು ಕ್ರಮ ಕೈಗೊಂಡಿದೆ?

ಶ್ರೀ ಸಿ.ಎಂ. ಉದಾಸಿ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು)

ಅ) ಹೌದು.

ಆ) ಈ ಹಿಂದೆ ಇಷ್ಟೊಂದು ಜನರನ್ನು ನೇಮಕ ಮಾಡಿದ್ದು ಸರಿಯಲ್ಲ.

ಇ) ಸರ್ಕಾರದಿಂದ ಬಿಡುಗಡೆಯಾದ ಅನುದಾನದಲ್ಲಿ ದಿನಗೂಲಿ ಸಿಬ್ಬಂದಿಗಳ ಪಾವತಿ ಭರಿಸಿದ ನಂತರ ಬಾಕಿ ಉಳಿದ ಅನುದಾನದಲ್ಲಿ ಕ್ರಿಯಾ ಯೋಜನೆ ಅಡಿಯಲ್ಲಿ ಅನುಮೋದಿತ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ.